# ಬಸವಣ್ಣನವರ ಪುತ್ತಳಿ ನಿರ್ಮಾಣ : ಮುರುಘಾ ಶರಣರ ಅಭಿನಂದನೆ

**ಚಿತ್ರದುರ್ಗ, ಜೂ. 26** - ಮಹಾಮಾನವತಾವಾದಿ, ಸಮಾಜಸುಧಾರಕ, ಸಮಸಮಾಜದ ನಿರ್ಮಾತೃಗಳಾದ ಬಸವಣ್ಣನವರ ಪುತ್ಥಳಿಯನ್ನು ವಿಧಾನಸೌಧದ ಮುಖ್ಯದ್ವಾರದ ಮುಂದೆ ಸ್ಥಾಪನೆ ಮಾಡಬೇಕೆಂದು ದಿ. 15-9-2021ರಂದು ಡಾ. ಶಿವಮೂರ್ತಿ ಮುರುಘಾ ಶರಣರು ಬೆಂಗಳೂರಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪನವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ಶ್ರೀಗಳ ಮನವಿಯನ್ನು ಸ್ವೀಕರಿಸಿ ಪುತ್ಥಳಿ ಸ್ಥಾಪನೆ ಬಗ್ಗೆ ಭರವಸೆ ನೀಡಿದ್ದರು. ಅದರಂತೆ ಈಗ ಮುಖ್ಯಮಂತ್ರಿಗಳು ಪುತ್ಥಳಿ ಸ್ಥಾಪನೆಗೆ ಚಾಲನೆ ನೀಡಲು ಮುಂದಾಗಿರುವುದು ಅತ್ಯಂತ ಸಂತಸವನ್ನುಂಟು ಮಾಡಿದೆ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಸನ್ಮಾನ್ಯ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪನವರನ್ನು ಅಭಿನಂದಿಸಿದ್ದಾರೆ.



